# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಮೆ: ಗಮೇಶ ವಿಂಡ್ ಟರ್ಬೈನ್ಸ್ ಪ್ರೈವೇಟ್ ಲಿಮಿಟೆಡ್ ಕಂಪನಿಯವರಿಗೆ ತತ್ವಶಃ ಅನುಮತಿ ನೀಡಿರುವ 50.15 ಮೆ.ವ್ಯಾ. ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯವನ್ನು 100 ಮೆ.ವ್ಯಾ. ಸಾಮರ್ಥ್ಯಕ್ಕೆ ಹೆಚ್ಚಿಸುವ ಬಗ್ಗೆ.

**ಓದಲಾಗಿದೆ:** 1) ಸರ್ಕಾರದ ಪತ್ರ ಸಂಖ್ಯೆ : ಇಎನ್ 285 ಎನ್‌ಸಿಇ 2012 ದಿನಾಂಕ : 25.9.2012.
2) ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ, ವ್ಯವಸ್ಥಾಪಕ ನಿರ್ದೇಶಕರ ಪತ್ರಗಳ ಸಂಖ್ಯೆ: ಕೆಆರ್‌ಇಡಿ/08/GWTPL-50.15 to 100 MW/ Gurmatkal/2013/2199 ದಿನಾಂಕ: 26.9.2013.

* * *

ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಪತ್ರದಲ್ಲಿ ಮೆ:: ಗಮೇಶ ವಿಂಡ್ ಟರ್ಬೈನ್ಸ್ ಪ್ರೈವೇಟ್ ಲಿಮಿಟೆಡ್ ಕಂಪನಿಗೆ ಯಾದಗಿರಿ ಜಿಲ್ಲೆಯ ಗುರುಮಿಟಕಲ್ ತಾಲ್ಲೂಕಿನ ಗುರುಮಿಟಕಲ್, ಸುಧಾಪುರ್, ದೇವರಪಲ್ಲಿ, ಗಜರ್‌ಕೋಟ್, ರಾಮ್‌ಪುರ್, ಶಿವಪುರ್, ಯಾದಲ್‌ಪುರ, ಚೆಪ್‌ಟಲ, ಕೋಕಲ್‌ವಾರ್, ಹಿಮಲಾಪುರ, ಬುದೂರ್, ಇಟಕಲ್, ಮಲ್‌ರೆಡ್ಡಪಲ್ಲಿ ಕೇಶ್ವಾರ್, ದಂತಾಪುರ ಮತ್ತು ಪುಟ್‌ಪಕ್ ಗ್ರಾಮಗಳಲ್ಲಿ 50.15 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಘಟಕ ಸ್ಥಾಪಿಸುವ ಬಗ್ಗೆ ವಿವರವಾದ ಯೋಜನಾ ವರದಿಯನ್ನು ಒಂದು ವರ್ಷದೊಳಗೆ ತಯಾರಿಸಿ ಸಲ್ಲಿಸುವ ಷರತ್ತಿಗೊಳಪಟ್ಟು ದಿನಾಂಕ 05.05.2012ರ ಹಂಚಿಕೆ ಸಮಿತಿ ಸಭೆಯಲ್ಲಿ ಕೈಗೊಂಡ ನಿರ್ಣಯದಂತೆ ತತ್ವಶಃ ಅನುಮತಿಯನ್ನು ನೀಡಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಮೆ : ಗಮೇಶ ವಿಂಡ್ ಟರ್ಬೈನ್ಸ್ ಪ್ರೈವೇಟ್ ಲಿಮಿಟೆಡ್ ಕಂಪನಿಗೆ ಯಾದಗಿರಿ ಜಿಲ್ಲೆಯ ಗುರುಮಿಟಕಲ್ ತಾಲ್ಲೂಕಿನ ಗುರುಮಿಟಕಲ್, ಸುಧಾಪುರ್, ದೇವರಪಲ್ಲಿ, ಗಜರ್‌ಕೋಟ್, ರಾಮ್‌ಪುರ್, ಶಿವಪುರ್, ಯಾದಲ್‌ಪುರ, ಚೆಪ್‌ಟಲ, ಕೋಕಲ್‌ವಾರ್, ಹಿಮಲಾಪುರ, ಬುದೂರ್, ಇಟಕಲ್, ಮಲ್‌ರೆಡ್ಡಪಲ್ಲಿ, ಕೇಶ್ವಾರ್, ದಂತಾಪುರ ಮತ್ತು ಪುಟ್‌ಪಕ್ ಗ್ರಾಮಗಳಲ್ಲಿ 50.15 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಅನುಷ್ಠಾನಕ್ಕೆ ತತ್ವಶಃ ಅನುಮೋದನೆ ನೀಡಿರುವ ಸಾಮರ್ಥ್ಯವನ್ನು 100.00 ಮೆ.ವ್ಯಾ. ಸಾಮರ್ಥ್ಯಕ್ಕೆ ಹೆಚ್ಚಿಸುವ ಕುರಿತಂತೆ ವಿಸ್ತೃತ ಯೋಜನಾ ವರದಿಯನ್ನು ತಯಾರಿಸಿ ಸಲ್ಲಿಸಿರುವುದಾಗಿ ತಿಳಿಸುತ್ತಾ, ಸಾಮರ್ಥ್ಯ ಹೆಚ್ಚಳಕ್ಕೆ ಸಂಬಂಧಿಸಿದಂತೆ ಅಭಿವೃದ್ಧಿದಾರರು ನಿಗಧಿತ ಶುಲ್ಕ ಪಾವತಿಸಿರುವುದಾಗಿ, ಸದರಿ ಯೋಜನೆಗೆ ಅವಶ್ಯಕವಾದ ಭೂಮಿಯು ಖಾಸಗಿ ಜಮೀನಾಗಿರುತ್ತದೆ. ಈ ಯೋಜನೆಯಿಂದ ಉತ್ಪಾದನೆ ಆಗುವ ವಿದ್ಯುತ್ತನ್ನು ಮಾರಾಟ ಮಾಡುವ ಬಗ್ಗೆ ಸಂಬಂಧಿಸಿದ ಎಸ್ಕಾಂನೊಂದಿಗೆ ವಿದ್ಯುತ್ ಖರೀದಿ ಒಪ್ಪಂದ ಹಾಗೂ ವೀಲಿಂಗ್ ಮತ್ತು ಬ್ಯಾಂಕಿಂಗ್ ಮೂಲಕ 3ನೇ ವ್ಯಕ್ತಿಗೆ ಮಾರಾಟ ಮಾಡುವ ಕುರಿತು ಒಪ್ಪಂದ ಮಾಡಿಕೊಳ್ಳುವ ಮತ್ತು ಯೋಜನೆಯನ್ನು 2017-18ರ ಒಳಗಾಗಿ ಅನುಷ್ಠಾನಗೊಸುವ ಷರತ್ತಿಗೊಳಪಟ್ಟು ಸಾಮರ್ಥ್ಯವನ್ನು ಹೆಚ್ಚಿಸಬಹುದೆಂಬ ಶಿಫಾರಸ್ಸಿನೊಂದಿಗೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಲಾಗಿದೆ:-

## ಸರ್ಕಾರಿ ಆದೇಶ ಸಂಖ್ಯೆ: ಇಎನ್ 246 ಎನ್‌ಸಿಇ 2013, ಬೆಂಗಳೂರು, ದಿನಾಂಕ: 22.10.2013.

ಸರ್ಕಾರದ ಪತ್ರ ಸಂಖ್ಯೆ : ಇಎನ್ 285 ಎನ್‌ಸಿಇ 2012 ದಿನಾಂಕ : 25.9.2012ರಲ್ಲಿ ಮೆ:: ಗಮೇಶ ವಿಂಡ್ ಟರ್ಬೈನ್ಸ್ ಪ್ರೈವೇಟ್ ಲಿಮಿಟೆಡ್ ಕಂಪನಿಯವರಿಗೆ ಯಾದಗಿರಿ ಜಿಲ್ಲೆಯ ಗುರುಮಿಟಕಲ್ ತಾಲ್ಲೂಕಿನ ಗುರುಮಿಟಕಲ್, ಸುಧಾಪುರ್, ದೇವರಪಲ್ಲಿ, ಗಜರ್‌ಕೋಟ್, ರಾಮ್‌ಪುರ್, ಶಿವಪುರ್, ಯಾದಲ್‌ಪುರ, ಚೆಪ್‌ಟಲ, ಕೋಕಲ್‌ವಾರ್, ಹಿಮಲಾಪುರ, ಬುದೂರ್, ಇಟಕಲ್, ಮಲ್‌ರೆಡ್ಡಪಲ್ಲಿಮ ಕೇಶ್ವಾರ್, ದಂತಾಪುರ ಮತ್ತು ಪುಟ್‌ಪಕ್ ಗ್ರಾಮಗಳಲ್ಲಿ 50.15 ಮೆ.ವ್ಯಾ ಪವನ ವಿದ್ಯುತ್ ಯೋಜನೆಯ ಅನುಷ್ಠಾನಕ್ಕೆ ತತ್ವಶಃ ಅನುಮೋದನೆ ನೀಡಿರುವ ಸಾಮರ್ಥ್ಯವನ್ನು **100.00** ಮೆ.ವ್ಯಾ. ಸಾಮರ್ಥ್ಯಕ್ಕೆ ಈ ಕೆಳಗಿನ ಶೆಡ್ಯೂಲ್‌ನಲ್ಲಿ ವಿವರಿಸಿರುವ ಹಾಗೂ ಕೆಳಕಂಡ ಷರತ್ತಿಗೊಳಪಟ್ಟು ಹೆಚ್ಚಿಸಿ ಆದೇಶಿಸಲಾಗಿದೆ :-

........2)

| Sl No. | Toposheet No. | Proposed capacity in MW | Near by villages of the proposed area and District | Geographical area description of the project |
|---|---|---|---|---|
| 1 | 56 H/5 | 100 MW<br><br>(50 Nos. x 2000 KW) | Gurmitkal, Sudhapur, Devarapalli, Gajarkot, Rampur, Shivpur, Yadalapur, Cheptala, Kokalavar, Himalapura, Budur, Itkal, Malreddipalli, Kesavar, Dantapura and Putpak villages in Gurumitkal Taluk, Yadgir District. | The proposed land is plain and nearer to Yadgir Reserve Forest and it is having several open scrubs. Yadgir to Hyderabad National Highway is crossing within the vicinity and the proposed area is adjacent to Andra Pradesh border and also power line crossing in the area. The area is having several peaks and is covered in the following Geographical co-ordinates as:<br>**Latitude**: 16°46'49"- 16°56'8.5 N<br>**Longitude**: 77°15'0- 77°28'38" E<br><br>**Peaks:** 542, 562, 622, 591, 581, 564, 524, 594, 611, 601, 623, 634, 572, 610, 609, 558, 567, 588 and 626m Amsl. |
| **TOTAL** | | **100 MW** | | |

1. ಸರ್ಕಾರಿ ಆದೇಶ ಸಂಖ್ಯೆ: ಇಎನ್ 354 ಎನ್‌ಸಿಇ 2008 ದಿನಾಂಕ: 19.01.2010 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ: ಇಎನ್ 07 ಎನ್‌ಸಿಇ 2011 ದಿನಾಂಕ 18.7.2011ರಲ್ಲಿ ನಿಗದಿಪಡಿಸಿರುವ (ಈ ಯೋಜನಾ ಅವಧಿಯನ್ನು ತತ್ವಶಃ ಅನುಮೋದನೆ ನೀಡಿದ ದಿನಾಂಕ: 25.9.2012ರಿಂದ ಪರಿಗಣಿಸಿ) ಅವಧಿಯೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.

2. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ಸರ್ಕಾರಿ ಆದೇಶ ಸಂಖ್ಯೆ ಇಎನ್ 435 ಎನ್‌ಸಿಇ 2011 ದಿನಾಂಕ 06.1.2012 ರನ್ವಯ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು. ತಪ್ಪಿದಲ್ಲಿ, ಈ ಹಂಚಿಕೆ ಆದೇಶ ತಂತಾನೆ ರದ್ದಾಗಿದೆ ಎಂದು ಭಾವಿಸುವುದು.

3. ಅಭಿವೃದ್ಧಿದಾರರು ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್‌ನಕ್ಷೆ ಮತ್ತು ವಿಂಡ್ ಫಾರ್ಮನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿ ಪಡಿಸಬೇಕು.

4. ಗಾಳಿ ಚಕ್ರದ ಹಬ್ ಹೈಟಿನಲ್ಲಿ ಪವನ ವೇಗದ ಅಳತೆ ಖಾತರಿ ಪಡಿಸಲು ಕೆಳಗಿನ ಕೋಷ್ಟಕದಲ್ಲಿ ವಿವರಿಸಿರುವಂತೆ ಪ್ರತಿ 5 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಒಂದರಂತೆ ಗಾಳಿ ಕಂಬವನ್ನು (ವಿಂಡ್ ಮಾಸ್ಟ್) ಅಳವಡಿಸಬೇಕು. ಅಳತೆ ವಿವರಗಳನ್ನು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸುವುದು.

| ಗಾಳಿ ಶಕ್ತಿ ವಿದ್ಯುತ್ತಿನ ದೂರ ಸಾಮರ್ಥ್ಯ | 5 ಮೆಗಾವ್ಯಾಟ್ ಗಾಳಿ ಯೋಜನೆಯಲ್ಲಿ ಸಾಧಾರಣ ಗಾಳಿ ಶಕ್ತಿ ವಿದ್ಯುತ್ತಿನ ಸಂಖ್ಯೆ | ಹಾಕಬೇಕಾಗಿರುವ ಗಾಳಿ ಕಂಬ (ವಿಂಡ್ ಮಾಸ್ಟ್‌ಗಳ ಸಂಖ್ಯೆ |
|---|---|---|
| > 200 ಕಿ.ವ್ಯಾ. ನಿಂದ 300 ಕಿ.ವ್ಯಾ. | 18 | 1 |
| > 300 ಕಿ.ವ್ಯಾ. ನಿಂದ 500 ಕಿ.ವ್ಯಾ. | 15 | 1 |
| > 500 ಕಿ.ವ್ಯಾ. ನಿಂದ 750 ಕಿ.ವ್ಯಾ. | 12 | 1 |
| > 750 ಕಿ.ವ್ಯಾ. ನಿಂದ 1000 ಕಿ.ವ್ಯಾ. | 8 ರಿಂದ 10 | 1 |

5. ಯೋಜನೆಯ ವಿವಿಧ ಹಂತದ ಚಟುವಟಿಕೆಗಳು ಹಾಗೂ ಯೋಜನೆಗಳಿಂದ ಪ್ರಾರಂಭದ ಹಂತದ ತನಕ ವಿವಿಧ ಮೈಲುಗಲ್ಲುಗಳನ್ನು ತೋರಿಸುವ ಪರ್ಟ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.

6. ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ/ಕಂದಾಯ ಇಲಾಖೆಗಳ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆದುಕೊಳ್ಳತಕ್ಕದ್ದು. ಅಭಿವೃದ್ಧಿದಾರರು ಈ ಯೋಜನೆಯನ್ನು ಖಾಸಗಿ ಜಮೀನಿನಲ್ಲಿ ಕೈಗೊಳ್ಳುತ್ತಿರುವುದರಿಂದ, ಖಾಸಗಿ ಜಮೀನಿನ ಮಾಲೀಕರಿಂದ ಒಪ್ಪಿಗೆ ಪತ್ರವನ್ನು ಪಡೆಯತಕ್ಕದ್ದು.

......3

7. ಅಭಿವೃದ್ಧಿದಾರರು ಸಂಬಂಧಿಸಿದ ವಿದ್ಯುತ್ ಸರಬರಾಜು ಕಂಪನಿಯೊಂದಿಗೆ ನೀತಿ ನಿಯಮಾನುಸಾರ ಪಿಪಿಎ / 3ನೇ ವ್ಯಕ್ತಿಯೊಂದಿಗೆ ವಿದ್ಯುತ್ ಮಾರಾಟ ಮಾಡುವ ಒಡಂಬಡಿಕೆ ಮಾಡಿಕೊಳ್ಳಲು ಅನುಮತಿಸಿದೆ.

8. ಸರ್ಕಾರಿ ಆದೇಶ ಸಂ:ಇಎನ್ 95 ಇಬಿಎಸ್ 2009 ದಿ:29.12.2009ರನ್ವಯ ವಿನಾಯಿತಿ ಸೌಲಭ್ಯಗಳು ಅನ್ವಯಿಸುವುದು.

9. ಅಭಿವೃದ್ಧಿದಾರರು ಪ್ರತಿ 6 ತಿಂಗಳಿಗೊಮ್ಮೆ ಯೋಜನೆಯ ಪ್ರಗತಿಯ ಕುರಿತು ಕೆಆರ್ಇಡಿಎಲ್‌ಗೆ ವರದಿ ಸಲ್ಲಿಸತಕ್ಕದ್ದು.

10. ಸದರಿ ಪವನ ವಿದ್ಯುತ್ ಯೋಜನೆಗಾಗಿ ಇಂಧನ ಇಲಾಖೆಯಿಂದ ಜಮೀನನ್ನು ಹಂಚಿಕೆ ಮಾಡಲಾಗುವುದಿಲ್ಲ ಹಾಗೂ ಈ ಹಂಚಿಕೆ ಆದೇಶವು ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯದ ಹಂಚಿಕೆಗೆ ಮಾತ್ರ ಸೀಮಿತವಾಗಿದೆ ಹಾಗೂ ಅಭಿವೃದ್ಧಿದಾರರಿಗೆ ಯೋಜನೆಯ ಜಾಗದಲ್ಲಿಯ ಖನಿಜ ಸಂಪತ್ತು ಹಾಗೂ ಭೂಮಿಯ ಬಗ್ಗೆ ಯಾವುದೇ ಹಕ್ಕು ಇರುವುದಿಲ್ಲ ಎಂಬುದನ್ನು ಮನಗಾಣತಕ್ಕದ್ದು.

11. ಸದರಿ ಆದೇಶವನ್ನು ರದ್ದು ಪಡಿಸುವ/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಪಿ.ಚಪ್ಪರಬಂದ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ,

ಇವರಿಗೆ:
ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಇವರಿಗೆ ಪ್ರಕಟಣೆಗಾಗಿ.
ಪ್ರತಿ:

1. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು-1.
2. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
3. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
5. ವ್ಯವಸ್ಥಾಪಕ ನಿರ್ದೇಶಕರು, ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ, ಗುಲ್ಬರ್ಗಾ.
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ನಂ. 39, 'ಶಾಂತಿಗೃಹ', ಭಾರತ್ ಸ್ಕೌಟ್ಸ್ & ಗೈಡ್ಸ್ ಬಿಲ್ಡಿಂಗ್, ಅರಮನೆರಸ್ತೆ, ಬೆಂಗಳೂರು-1.
7. ಜಿಲ್ಲಾಧಿಕಾರಿಗಳು, ಯಾದಗಿರಿ ಜಿಲ್ಲೆ, ಯಾದಗಿರಿ.
8. ಉಪ ಅರಣ್ಯ ಸಂರಕ್ಷಣಾಧಿಕಾರಿ ಯಾದಗಿರಿ ಜಿಲ್ಲೆ, ಯಾದಗಿರಿ.
9. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
10. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
11. ಮೆ : ಗಮೇಶ ವಿಂಡ್ ಟರ್‌ಬೈನ್ಸ್ ಪ್ರೈವೇಟ್ ಲಿಮಿಟೆಡ್, ಯೂನಿಟ್ 1/7, ದಿ ಪ್ರೆಸಿಡೆನ್ಸಿ, ನಂ.1 (ನ್ಯೂ ನಂ.82), ಸೆಂಟ್ ಮಾರ್ಕ್ಸ್ ರೋಡ್, ಬೆಂಗಳೂರು-01.
12. ಶಾಖಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.